# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ** : 2021-22 ನೇ ಸಾಲಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ ಅನುಷ್ಠಾನಗೊಳಿಸುತ್ತಿರುವ ಟ್ಯಾಕ್ಸಿ/ಗೂಡ್ಸ್ ವಾಹನ ಹಾಗೂ ಪ್ಯಾಸಂಜರ್ ಆಟೋ ಖರೀದಿ ಯೋಜನೆಯನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ**
1.) ಸರ್ಕಾರದ ಆದೇಶ ಸಂಖ್ಯೆ:MWD 50 MDC 2021, ಬೆಂಗಳೂರು ದಿನಾಂಕ:27-07-2021.
2.) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಇವರ ಏಕ ಕಡತ ಸಂಖ್ಯೆ: ಕಅಅನಿ/ಟ್ಯಾಗೂವಾ/2021-22/742 ದಿನಾಂಕ:29-07-2021.

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ.(1)ರಲ್ಲಿ 2021-22 ನೇ ಸಾಲಿನ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ ಕಾರ್ಯಕ್ರಮಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ (2) ರಲ್ಲಿ ಪ್ರಸಕ್ತ ರಾಜ್ಯದೆಲ್ಲೆಡೆ ಕೋವಿಡ್-19 ಅನ್‌ಲಾಕ್ ಪ್ರಕ್ರಿಯೆ ಜಾರಿಯಲ್ಲಿದ್ದರೂ ಮುಂಬರುವ ದಿನಗಳಲ್ಲಿ ಕೋವಿಡ್ 3ನೇ ಅಲೆಯು ಹರಡುವ ಸಂಭಾವ್ಯದ ಹಿನ್ನೆಲೆಯಲ್ಲಿ ಅಲ್ಪಸಂಖ್ಯಾತರ ಟ್ಯಾಕಿ ವಾಹನ ಚಲಾಯಿಸುವ ಬಳಕೆ ಕಡಿಮೆಯಾಗಿದ್ದು ಹಾಗೂ ಆರ್ಥಿಕ ಇಲಾಖೆಯು 2021-22 ನೇ ಸಾಲಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಸಾಕಷ್ಟು ಅನುದಾನವು ಕಡಿತಗೊಳಿಸಿರುವುದರಿಂದ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಟ್ಯಾಕ್ಸಿ/ಗೂಡ್ಸ್ ವಾಹನ ಖರೀದಿ ಯೋಜನೆಗೆ ನೀಡಲಾಗುತ್ತಿದ್ದ ಸಹಾಯಧನವನ್ನು ಟ್ಯಾಕ್ಸಿ/ಗೂಡ್ಸ್ ವಾಹನ ಖರೀದಿಯ ಜೊತೆಗೆ ಹೊಸ ಪ್ಯಾಸೆಂಜರ್ ಆಟೋ ರಿಕ್ಷಾವನ್ನು 2021-22 ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ ತೆರಿಗೆ ಸೇರಿಸಿ ರೂ.75,000 ಸಹಾಯಧನಕ್ಕೆ ಪರಿಷ್ಕೃತ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: MWD 50 MDC 2021,ಬೆಂಗಳೂರು, ದಿನಾಂಕ:09-08-2021.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳ್ಳುತ್ತಿರುವ ಟ್ಯಾಕ್ಸಿ/ಗೂಡ್ಸ್ ವಾಹನ ಖರೀದಿಸಲು ಯೋಜನೆಗೆ ನೀಡಲಾಗುತ್ತಿದ್ದ ಸಹಾಯಧನವನ್ನು ಟ್ಯಾಕ್ಸಿ/ಗೂಡ್ಸ್ ವಾಹನ ಜೊತೆಗೆ ಹೊಸ ಪ್ಯಾಸೆಂಜರ್ ಆಟೋರಿಕ್ಷಾ ಖರೀದಿಗೆ ತೆರಿಗೆ ಸೇರಿಸಿ ಗರಿಷ್ಠ ರೂ.75,000 (ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಸಹಾಯಧನವನ್ನು 2021-22 ಮತ್ತು 2022-23 ನೇ ಸಾಲಿನ ಮಾರ್ಚ್ ಅಂತ್ಯದವರೆಗೆ ಮಾತ್ರ ಅನ್ವಯವಾಗುವಂತೆ ಪರಿಷ್ಕರಿಸಿ ಈ ಕೆಳಕಂಡ ಷರತ್ತುಗಳೊಂದಿಗೆ ಅನುಮತಿ ನೀಡಿ ಆದೇಶಿಸಲಾಗಿದೆ.

......2

S.A. D:\CHANDRU\G O 2020-21

Scanned with CamScanner

ಷರತ್ತುಗಳು:

1. ಈ ಯೋಜನೆಯಡಿಯಲ್ಲಿ ಖರೀದಿಸುವ ಹೊಸ ಪ್ಯಾಸೆಂಜರ್ ಆಟೋ ವಾಹನದ ಮೌಲ್ಯ ವಿವಿಧ ಕಂಪನಿಯ ಬೆಲೆ ಕನಿಷ್ಠ ರೂ.(Basic Price) ರೂ.1.50 ಲಕ್ಷಗಳಿಂದ ಗರಿಷ್ಠ ರೂ.2.90 ಲಕ್ಷ ಗಳಾಗಿರತಕ್ಕದ್ದು. (ತೆರಿಗೆಯನ್ನು ಸೇರಿಸಿ). ಸರ್ಕಾರದ ಆದೇಶ ಸಂಖ್ಯೆ: MWD 29 MDC 2020, ದಿನಾಂಕ:27-08-2020 ರ ಆದೇಶವನ್ನು ಹಿಂಪಡೆಯಲಾಗಿದೆ.

2. ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಇದರ ನಿಬಂಧನೆ/ಷರತ್ತುಗಳನ್ನು ತಮ್ಮ ಹಂತದಲ್ಲಿಯೇ ಹೊರಡಿಸತಕ್ಕದ್ದು. 2021-22 ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ನಿಗದಿಪಡಿಸಿರುವ ಅನುದಾನವನ್ನು ಮೀರತಕ್ಕದ್ದಲ್ಲ ಹಾಗೂ ಈ ಯೋಜನೆಯನ್ನು 2021-22 ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಿರುವ ಅನುದಾನಲ್ಲಿಯೇ ಭರಿಸತಕ್ಕದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ:05-04-2021 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಮುಕ್ತಾರ್ ಪಾಷ ಹೆಚ್.ಜಿ.)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ.

ಗೆ:

1) ಮಹಾಲೇಖಪಾಲರು, (ಅ & ಇ) ಕರ್ನಾಟಕ, ಬೆಂಗಳೂರು.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ವಿ.ವಿ.ಗೋಪುರ, ಬೆಂಗಳೂರು.
3) ನಿರ್ದೇಶಕರು, ಖಜಾನೆ ಇಲಾಖೆ ವಿ.ವಿ.ಗೋಪುರ, ಪೋಡಿಯಂ ಬ್ಲಾಕ್, ಬೆಂಗಳೂರು.
4) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲೆಯ ಜಿಲ್ಲಾ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
6) ಎಲ್ಲಾ ಜಿಲ್ಲೆಯ ಎಸ್.ಎಲ್.ಬಿ.ಸಿ.

ಪ್ರತಿ ಮಾಹಿತಿಗಾಗಿ

1) ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನ ಸೌಧ, ಬೆಂಗಳೂರು
3) ಆಂತರಿಕ ಆರ್ಥಿಕ ಸಲಹೆಗಾರರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವಿಕಾಸ ಸೌದ, ಬೆಂಗಳೂರು.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

S.A D:\CHANDRU\S.U 2020-21

Scanned with CamScanner